# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 1195 |
| ಸದಸ್ಯರ ಹೆಸರು: | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು: | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ: | : | 13/03/2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; | ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಒಟ್ಟು 515 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಸದರಿ ಅಂಗನವಾಡಿ ಕೇಂದ್ರಗಳಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಟ್ಟಡಗಳ ಸಂಖ್ಯೆ ಎಷ್ಟು; | ಸಿಂಧನೂರು ತಾಲ್ಲೂಕಿನಲ್ಲಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವ ಕಟ್ಟಡಗಳ ವಿವರ ಈ ಕೆಳಗಿನಂತಿದೆ. (see table below) |
| ಇ) | ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಸರ್ಕಾರದ ನಿಲುವೇನು: | ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಗ್ರಾಮ ಪಂಚಾಯತ್, ಪಟ್ಟಣ ಪಂಚಾಯತ್, ಪುರಸಭೆ ಹಾಗೂ ನಗರಸಭೆಯಿಂದ ಸರ್ಕಾರಿ ಜಾಗಗಳನ್ನು ಗುರುತಿಸಲು ಕ್ರಮ ಜರುಗಿಸಲಾಗುತ್ತಿದ್ದು, ಪ್ರಸ್ತುತ ಸಿಂಧನೂರು ನಗರದಲ್ಲಿ 02 ಸಿ.ಎ ನಿವೇಶನಗಳ ಖರೀದಿಗಾಗಿ ಅನುದಾನ ಬಿಡುಗಡೆಯಾಗಿರುತ್ತದೆ.<br><br>ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕೆ.ಕೆ.ಆರ್.ಡಿ.ಬಿ. ಯೋಜನೆಯಡಿ 16 ಕಟ್ಟಡಗಳು ಮತ್ತು ತಾಲ್ಲೂಕು ಪಂಚಾಯತ್ ಅನಿರ್ಬಂದಿತ ಅನುದಾನದಲ್ಲಿ 3 ಕಟ್ಟಡಗಳು ಮಂಜೂರಾಗಿರುತ್ತವೆ. |

| ಕಾರ್ಯ ನಿರ್ವಹಿಸುತ್ತಿರುವ ಸ್ಥಳ | ಅಂಗನವಾಡಿ ಕೇಂದ್ರಗಳ ಸಂಖ್ಯೆ |
|---|---|
| ಸ್ವಂತ ಕಟ್ಟಡ | 332 |
| ಬಾಡಿಗೆ ಕಟ್ಟಡ | 147 |
| ಶಾಲಾ ಕಟ್ಟಡ | 16 |
| ಪಂಚಾಯತ್ ಕಟ್ಟಡ | 02 |
| ಸಮುದಾಯ ಭವನ | 09 |
| ಇತರೆ ಸರ್ಕಾರಿ ಕಟ್ಟಡ | 09 |
| **ಒಟ್ಟು** | **515** |

| | | |
|---|---|---|
| ಈ) | ಯಾವ ಕಾಲಮಿತಿಯೊಳಗೆ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಅನುದಾನ ಬಿಡುಗಡೆ ಮಾಡಲಾಗುವುದು? | ನಿವೇಶನ ಮತ್ತು ಅನುದಾನದ ಲಭ್ಯತೆಯ ಆಧಾರದ ಮೇರೆಗೆ ಹಂತ ಹಂತವಾಗಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಮಮಇ 68 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.